## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕರ್ನಾಟಕ ಅಂತರ್ಜಲ ಪ್ರಾಧಿಕಾರಕ್ಕೆ ಸಂಬಂಧಿಸಿದ ಪತ್ರ ವ್ಯವಹಾರಗಳಿಗೆ ಅಂತರ್ಜಲ ನಿರ್ದೇಶನಾಲಯದ ನಿರ್ದೇಶಕರಿಗೆ ಅಧಿಕಾರವನ್ನು ಪ್ರತ್ಯಾಯೋಜಿಸುವ ಬಗ್ಗೆ.

*****

**ಓದಲಾಗಿದೆ:**

1. ನಿರ್ದೇಶಕರು, ಅಂತರ್ಜಲ ನಿರ್ದೇಶನಾಲಯ ಇವರ ಪತ್ರ ಸಂಖ್ಯೆ: ಅಜನಿ/ಕಅಂಪ್ರಾ/ತಿದ್ದುಪಡಿ/53/2016-17ರ, ದಿ:23.12.2016.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಮತ್ತು ನಿರ್ವಹಣೆಯ ವಿನಿಯಮ ಹಾಗೂ ನಿಯಂತ್ರಣ) ವಿಧೇಯಕ 2011ರಂತೆ ಸರ್ಕಾರದ ಆದೇಶ ದಿ:16.03.2012ರಲ್ಲಿ ಕರ್ನಾಟಕ ಅಂತರ್ಜಲ ಪ್ರಾಧಿಕಾರಕ್ಕೆ ಒಟ್ಟು 19 ಜನ ಸದಸ್ಯರನ್ನೊಳಗೊಂಡ ಪ್ರಾಧಿಕಾರವನ್ನು ರಚಿಸಲಾಗಿರುತ್ತದೆ. ಈ ಕರ್ನಾಟಕ ಅಂತರ್ಜಲ ಪ್ರಾಧಿಕಾರದಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆ, ಆಯುಕ್ತರು / ನಿರ್ದೇಶಕರು, ಸದಸ್ಯ ಕಾರ್ಯದರ್ಶಿಗಳಾಗಿದ್ದು, ಪ್ರಾಧಿಕಾರಕ್ಕೆ ಸಂಬಂಧಿಸಿದಂತೆ ಸಹಿ ಮಾಡಲು ಅಧಿಕಾರ ಹೊಂದಿರುತ್ತಾರೆಂದು ಹಾಗೂ ನಿರ್ದೇಶಕರು, ಅಂತರ್ಜಲ ನಿರ್ದೇಶನಾಲಯರವರನ್ನು ಅಧಿನಿಯಮ 2011ರಂತೆ ಕಾರ್ಯನಿರ್ವಹಿಸುವ ಪತ್ರ ವ್ಯವಹಾರಗಳು ಹಾಗೂ ಕಲಂ 13ರಡಿಯಲ್ಲಿ ರಿಗ್ ಯಂತ್ರಗಳ ನೊಂದಣಿ / ನಿರಾಕರಣೆ, ವಾಣಿಜ್ಯ ಬಳಕೆಗಾಗಿ ಅನುಮತಿ / ನಿರಾಕರಣೆ ನೀಡುವ ಕುರಿತ ನಮೂನೆಗಳಿಗೆ ಸಹಿ ಮಾಡುವ ಅಧಿಕಾರವನ್ನು ಪ್ರತ್ಯಾಯೋಜಿಸುವಂತೆ ದಿನಾಂಕ: 23.12.2016ರ ಪತ್ರದಲ್ಲಿ ನಿರ್ದೇಶಕರು, ಅಂತರ್ಜಲ ನಿರ್ದೇಶನಾಲಯ ಇವರು ಕೋರಿರುತ್ತಾರೆ.

ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ಅಂತರ್ಜಲ ಪ್ರಾಧಿಕಾರ ಇವರ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸನೀಇ 01 ಅಜಅ 2017, ಬೆಂಗಳೂರು, ದಿನಾಂಕ: 17 ಜನವರಿ 2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಅಂತರ್ಜಲ ಪ್ರಾಧಿಕಾರಕ್ಕೆ ನಿರ್ದೇಶಕರು, ಅಂತರ್ಜಲ ನಿರ್ದೇಶನಾಲಯರವರನ್ನು ಅಧಿನಿಯಮ 2011ರಂತೆ ಕಾರ್ಯನಿರ್ವಹಿಸುವ ಪತ್ರ ವ್ಯವಹಾರಗಳು ಹಾಗೂ ಕಲಂ 13ರಡಿಯಲ್ಲಿ ರಿಗ್ ಯಂತ್ರಗಳ ನೊಂದಣಿ / ನಿರಾಕರಣೆ, ವಾಣಿಜ್ಯ ಬಳಕೆಗಾಗಿ ಅನುಮತಿ / ನಿರಾಕರಣೆ ನೀಡುವ ಕುರಿತ ನಮೂನೆಗಳಿಗೆ ಸಹಿ ಮಾಡುವ ಅಧಿಕಾರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಪ್ರತ್ಯಾಯೋಜಿಸಿ ಅನುಮೋದನೆ ನೀಡಲಾಗಿದೆ.

17/1/17

**ಷರತ್ತು:**

ಅಂತರ್ಜಲ ಪ್ರಾಧಿಕಾರದಲ್ಲಿ ಸದಸ್ಯ ಕಾರ್ಯದರ್ಶಿಯವರಾಗಿ ಆಯುಕ್ತರು / ನಿರ್ದೇಶಕರು ಇವರ ಬದಲಿಗೆ ನಿರ್ದೇಶಕರು, ಅಂತರ್ಜಲ ನಿರ್ದೇಶನಾಲಯರವರನ್ನು ಸದಸ್ಯ ಕಾರ್ಯದರ್ಶಿಗಳೆಂದು ಅಧಿನಿಯಮ 2011ರ ಕಲಂ 3(3)ಬಿ ರಡಿ ತಿದ್ದುಪಡಿಯಾಗುವವರೆಗು ಜಾರಿಯಲ್ಲಿರುತ್ತದೆ.

ನಿರ್ದೇಶಕರ ಕಛೇರಿ
ಅಂತರ್ಜಲ ನಿರ್ದೇಶನಾಲಯ
Office of the Director
Ground Water Directorate
17 JAN 2017
3881
ಬೆಂಗಳೂರು-560 001
Bengaluru-560 001

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ಎನ್.ಪಾಟೀಲ)
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ).

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು, (ಜಿ &ಎಸ್.ಎಸ್.ಎ.)-(ಇ&ಆರ್.ಎಸ್.ಎ) ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ" ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.

2) ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ) ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಅಂಚೆಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು.
3) ಮಾನ್ಯ ಮುಖ್ಯಮಂತ್ರಿಯವರ ಅಪರ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಸಣ್ಣ ನೀರಾವರಿ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿಗಳು ವಿಧಾನಸೌಧ, ಬೆಂಗಳೂರು.
5) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
7) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ, ವಿಧಾನ ಸೌಧ, ಬೆಂಗಳೂರು.
8) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
9) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿ.ಆ.ಸು ಇಲಾಖೆ, ವಿಧಾನ ಸೌಧ, ಬೆಂಗಳೂರು.
10) ನಿರ್ದೇಶಕರು, ಅಂತರ್ಜಲ ನಿರ್ದೇಶನಾಲಯ, ಖನಿಜ ಭವನ, ಬೆಂಗಳೂರು.
11) ನಿರ್ದೇಶಕರು, ಗಣಿ ಮತ್ತು ಭೂ ವಿಜ್ಞಾನ ಇಲಾಖೆ, ಖನಿಜ ಭವನ, ಬೆಂಗಳೂರು.
12) ಸರ್ಕಾರದ ಅಧೀನ ಕಾರ್ಯದರ್ಶಿ, (ವೆಚ್ಚ) ಆರ್ಥಿಕ ಇಲಾಖೆ, ವಿಧಾನ ಸೌಧ ಬೆಂಗಳೂರು
13) ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ಲೋಕೋಪಯೋಗಿ ಆರ್ಥಿಕ ಕೋಶ) ವಿಧಾನ ಸೌಧ ಬೆಂಗಳೂರು
14) ಸರ್ಕಾರದ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, (ಸಣ್ಣ ನೀರಾವರಿ)ರವರ ಹಿರಿಯ ಆಪ್ತಕಾರ್ಯದರ್ಶಿಯವರಿಗೆ.
15) ಸರ್ಕಾರದ ಉಪ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, (ಸೇವೆಗಳು) / (ತಾಂತ್ರಿಕ) ರವರ ಆಪ್ತ ಸಹಾಯಕರಿಗೆ.
16) ಸಂಬಂಧಪಟ್ಟ ಎಲ್ಲಾ ನಾಮ ನಿರ್ದೇಶಿತ ನಿರ್ದೇಶಕರುಗಳಿಗೆ (ನಿರ್ದೇಶಕರು, ಅಂತರ್ಜಲ ನಿರ್ದೇಶನಾಲಯ, ಇವರ ಮುಖಾಂತರ).
17) ವಾರದ ಪತ್ರ / ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.